## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿಯಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಪ್ರಾರಂಭಿಸುವ ಬಗ್ಗೆ.

ಓದಲಾಗಿದೆ:-

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 48 ಶಾಸನ 2015, ದಿನಾಂಕ:05.05.2016.
2. ಸನ್ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 18.07.2017 ರ ಸಭಾ ನಡವಳಿ.
3. ಸರ್ಕಾರದ ಆದೇಶ ಸಂಖ್ಯೆ: ಹಿಂವಕ 265 ಬಿಸಿಎ 2017, ದಿನಾಂಕ:01.12.2017.
4. ಮಾನ್ಯ ಮುಖ್ಯ ಮಂತ್ರಿಗಳು ರಕ್ಷಣಾ ಸಚಿವರು,ಭಾರತ ಸರ್ಕಾರ ಇವರಿಗೆ ಬರೆದ ಪತ್ರ ಸಂಖ್ಯೆ: CM/30/GOI/2022, ದಿನಾಂಕ:05.02.2022
5. ಅಧೀನ ಕಾರ್ಯದರ್ಶಿಗಳು, ಸೈನಿಕ ಶಾಲೆ ಸೊಸೈಟಿ, ಭಾರತ ಸರ್ಕಾರ ಇವರ ಪತ್ರ ಸಂಖ್ಯೆ:9(6)/2021(Part File 04)/SNKLP007992022, ದಿನಾಂಕ:25.03.2022.
6. ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ ಅಭಿವೃದ್ಧಿ ಪ್ರಾಧಿಕಾರ ಇವರ ಏಕಕಡತ ಸಂಖ್ಯೆ. ಕ್ರಾಸ.ಸಂ.ರಾ.ಕ್ಷೇ.ಅ.ಪ್ರಾ/ಒಪ್ಪಂದ/ಸಿ.ಆರ್-15/2021-22.
7. ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿವೃದ್ಧಿ ಪ್ರಾಧಿಕಾರ ಇವರ ಏಕಕಡತ ಸಂಖ್ಯೆ BCWD-14013/1 /2022-COMM-BCWD-BCWD
8. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಅಇ 226 ವೆಚ್ಚ-3/2022, ದಿನಾಂಕ:30.04.2022.

*********

ಪ್ರಸ್ತಾವನೆ:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರವನ್ನು ಸೃಜಿಸಿ ಆದೇಶ ಹೊರಡಿಸಲಾಗಿರುತ್ತದೆ..

ಮೇಲೆ ಓದಲಾದ ಕ್ರಮ ಸಂಖ್ಯೆ( 2) ಮತ್ತು (3)ರಲ್ಲಿ ಮಾನ್ಯ ಮುಖ್ಯ ಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಪ್ರಥಮ ಸಭೆಯಲ್ಲಿ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿಯಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಪ್ರಾರಂಭಿಸಲು ತೀರ್ಮಾನಿಸಲಾಗಿರುತ್ತದೆ ಹಾಗೂ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿಯಲ್ಲಿ ಸಂಗೊಳ್ಳಿ ರಾಯಣ್ಣ ಸ್ಮಾರಕ ಸೈನಿಕ ಶಾಲೆಗೆ ರೂ.15557.00 ಲಕ್ಷಗಳ ಕಾಮಗಾರಿಗೆ ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (4)ರಲ್ಲಿ ಸನ್ಮಾನ್ಯ ಮುಖ್ಯ ಮಂತ್ರಿಗಳು, ರಕ್ಷಣಾ ಸಚಿವರು, ಭಾರತ ಸರ್ಕಾರ ಇವರಿಗೆ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿಯಲ್ಲಿ ಸೈನಿಕ ಶಾಲೆಯು ನಿರ್ಮಾಣವಾಗುತ್ತಿದ್ದು, ಅಂತಿಮ ಹಂತದಲ್ಲಿದೆ. ಸದರಿ ಶಾಲೆಯನ್ನು ತ್ರಿಸದಸ್ಯರ ಪರಿಶೀಲನಾ ಸಮಿತಿಯು ಪರಿಶೀಲಿಸಿ ಅಂತಿಮ ಹಂತದಲ್ಲಿರುವುದಾಗಿ ತಿಳಿಸಿರುತ್ತಾರೆ. ಆದ್ದರಿಂದ ಸದರಿ ಶಾಲೆಯನ್ನು ಪ್ರಾರಂಭಿಸಲು ಭಾರತ ಸರ್ಕಾರವು ಒಪ್ಪಂದ ಕರಾರು(Memorandum of Agreement)ಪತ್ರಕ್ಕೆ ಸಹಿ ಹಾಕಿ ಶಾಲೆಯನ್ನು ರಕ್ಷಣಾ ಇಲಾಖೆಯ ಅಧೀನಕ್ಕೆ ಒಳಪಡಿಸಿಕೊಳ್ಳುವಂತೆ ತಿಳಿಸಿರುತ್ತಾರೆ.

18/5/22

ಮೇಲೆ ಓದಲಾದ ಕ್ರಮ ಸಂಖ್ಯೆ (5)ರಲ್ಲಿ ಕೇಂದ್ರ ರಕ್ಷಣಾ ಮಂತ್ರಾಲಯದ ಅಧೀನದಲ್ಲಿ ಬರುವ ಸೈನಿಕ ಶಾಲೆ ಸೊಸೈಟಿಯು 2022-23ನೇ ಶೈಕ್ಷಣಿಕ ವರ್ಷದಲ್ಲಿಯೇ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಸಹಭಾಗಿತ್ವದಲ್ಲಿ ಪ್ರಾರಂಭಿಸಲು ಅನುಮತಿ ನೀಡಿದ್ದು, ದಿನಾಂಕ:31.03.2022 ರೊಳಗಾಗಿ ಭಾರತ ಸರ್ಕಾರದೊಂದಿಗೆ ಒಪ್ಪಂದ ಕರಾರು (Memorandum of Agreement)ಪತ್ರಕ್ಕೆ ಸಹಿ ಹಾಕಲು ಕ್ರಮ ಕೈಗೊಳ್ಳುವಂತೆ ಸೂಚಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (6)ರಲ್ಲಿ ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಅಭಿವೃದ್ಧಿ ಪ್ರಾಧಿಕಾರ ಇವರು ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಪ್ರಾರಂಭಿಸಲು ಕೇಂದ್ರ ರಕ್ಷಣಾ ಮಂತ್ರಾಲಯವು ಅನುಮತಿಯನ್ನು ನೀಡಿದ್ದು, ಸೈನಿಕ ಶಾಲೆ ಸೊಸೈಟಿಯೊಂದಿಗೆ ಕರಾರು ಒಪ್ಪಂದ ಮಾಡಿಕೊಳ್ಳಲು ದಿನಾಂಕ:31.03.2022ರಂದು ಕೊನೆಯ ದಿನಾಂಕ ನಿಗದಿಪಡಿಸಿರುತ್ತಾರೆ. ಈ ಹಿನ್ನಲೆಯಲ್ಲಿ ಸೈನಿಕ ಶಾಲೆಯ ಪರವಾಗಿ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇವರು ಒಪ್ಪಂದ ಕರಾರು ಪತ್ರಕ್ಕೆ ಸಹಿ ಹಾಕಲು ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ(7)ರಲ್ಲಿ ಕ್ರಾಂತೀವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿ ಗ್ರಾಮದಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಕೇಂದ್ರ ರಕ್ಷಣಾ ಇಲಾಖೆಯ ಸೈನಿಕ ಸ್ಕೂಲ್ ಸೊಸೈಟಿ ದಿನಾಂಕ:25.03.2022ರ ಪತ್ರದ ಅನುಸಾರ 6ನೇ ತರಗತಿಯಿಂದ ಶಾಲೆಯನ್ನು ಪ್ರಾರಂಭಿಸಲು ಸೂಕ್ತ ಆದೇಶ ಹೊರಡಿಸುವಂತೆ ಕೋರಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸದರಿ ಕಡತವನ್ನು ಆರ್ಥಿಕ ಇಲಾಖೆಗೆ ಕಳುಹಿಸಲಾಗಿ, ಆರ್ಥಿಕ ಇಲಾಖೆಯು ಉಲ್ಲೇಖ(8) ರಲ್ಲಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಪ್ರಾರಂಭಿಸಲು ಕೇಂದ್ರ ರಕ್ಷಣಾ ಮಂತ್ರಾಲಯದ ಅಧೀನದಲ್ಲಿ ಬರುವ ಸೈನಿಕ ಸ್ಕೂಲ್ ಸೊಸೈಟಿಯಿಂದಿಗೆ ಒಪ್ಪಂದ ಕರಾರು (Memorandum Of Agreement) ಪತ್ರಕ್ಕೆ ಸಹಿ ಮಾಡಲು ಸದರಿ ಶಾಲೆಗೆ ಪ್ರವೇಶಾತಿ ಪಡೆಯುವ ರಾಜ್ಯದ ವಿದ್ಯಾರ್ಥಿಗಳಿಗೆ ಮಾತ್ರ ರಾಜ್ಯ ಸರ್ಕಾರದ ವತಿಯಿಂದ ಅನುದಾನ ನೀಡಲಾಗುವುದು ಎಂಬ ಷರತ್ತಿಗೊಳಪಟ್ಟು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

ಈ ಮೇಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಬಿಸಿಡಬ್ಲ್ಯೂ 304 ಬಿಎಂಎಸ್ 2022,**
**ಬೆಂಗಳೂರು, ದಿನಾಂಕ:18-05-2022**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಸಂಗೊಳ್ಳಿಯಲ್ಲಿ ಕೇಂದ್ರ ರಕ್ಷಣಾ ಮಂತ್ರಾಲಯದ ಅಧೀನದಲ್ಲಿ ಬರುವ ಸೈನಿಕ ಸ್ಕೂಲ್ ಸೊಸೈಟಿಯ ಸಹಯೋಗದೊಂದಿಗೆ 2022-23ನೇ ಸಾಲಿನಿಂದ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು ಮೊದಲನೇ ಹಂತದಲ್ಲಿ 6ನೇ ತರಗತಿಯ ಎರಡು ವಿಭಾಗಗಳಿಗೆ ತಲಾ 40 ವಿದ್ಯಾರ್ಥಿಗಳಂತೆ 80 ವಿದ್ಯಾರ್ಥಿಗಳಿಗೆ ದಾಖಲಾತಿ ಮಾಡಿಕೊಳ್ಳುವ ಮೂಲಕ ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಶಾಲೆಯನ್ನು ಪ್ರಾರಂಭಿಸಲು ಅನುಮತಿ ನೀಡಿ ಆದೇಶಿಸಲಾಗಿದೆ.

**ಷರತ್ತುಗಳು:**

1. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು 2022-23ನೇ ಶೈಕ್ಷಣಿಕ ವರ್ಷದಿಂದಲೇ ಪ್ರಾರಂಭಿಸಲು ನಿಯಮಾನುಸಾರ ಕ್ರಮವಹಿಸತಕ್ಕದ್ದು.
2. ಸದರಿ ಶಾಲೆಯನ್ನು ಕೇಂದ್ರ ಸರ್ಕಾರ ಸೈನಿಕ ಶಾಲೆಗಳಿಗೆ ನಿಗದಿಪಡಿಸಿರುವ ಪಠ್ಯಕ್ರಮ ಹಾಗೂ ನಿಯಮಗಳಂತೆ ನಿರ್ವಹಣೆ ಮಾಡತಕ್ಕದ್ದು.
3. ಸದರಿ ಶಾಲೆಗೆ ಪ್ರವೇಶಾತಿ ಪಡೆಯುವ ರಾಜ್ಯದ ವಿದ್ಯಾರ್ಥಿಗಳಿಗೆ ಮಾತ್ರ ರಾಜ್ಯ ಸರ್ಕಾರದ ವತಿಯಿಂದ ಅನುದಾನ ನೀಡಲಾಗುವುದು.

18/5/22

4. 2022-23ನೇ ಸಾಲಿನ ಆಯವ್ಯಯದಲ್ಲಿ ಲೆಕ್ಕಶೀರ್ಷಿಕೆ:2225-03-190-0-06-059ರಡಿ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರಕ್ಕೆ ಒದಗಿಸಿರುವ ಅನುದಾನದಲ್ಲಿ ರೂ.3.00ಕೋಟಿಗಳನ್ನು ಸದರಿ ಶಾಲೆಯ ನಿರ್ವಹಣೆ, ಪೀಠೋಪಕರಣ ಮತ್ತು ಮೂಲಭೂತ ಸೌಕರ್ಯಕ್ಕೆ ಬಳಸಿಕೊಳ್ಳುವುದು.
5. ಕೆ.ಟಿ.ಪಿ.ಪಿ ಕಾಯ್ದೆ ಹಾಗೂ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

ಮುಂದುವರೆದು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಸೈನಿಕ ಶಾಲೆಯನ್ನು 2022-2023 ರಲ್ಲಿ 6ನೇ ತರಗತಿಯ ಎರಡು ವಿಭಾಗಗಳಲ್ಲಿ ಒಟ್ಟು 80 ವಿದ್ಯಾರ್ಥಿಗಳನ್ನು ದಾಖಲಾತಿ ಮಾಡಿಕೊಳ್ಳುವ ಮೂಲಕ ಪ್ರಾರಂಭಿಸಲು ಅವಶ್ಯಕವಿರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಸೃಜಿಸಲು ಹಾಗೂ ಶಾಲೆಗೆ ಅವಶ್ಯವಿರುವ ನಿರ್ವಹಣೆ, ಪೀಠೋಪಕರಣ ಮತ್ತು ಮೂಲಭೂತ ಸೌಕರ್ಯ ಒದಗಿಸುವ ಕುರಿತಂತೆ ಪ್ರತ್ಯೇಕ ಆದೇಶ ಹೊರಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 226 ವೆಚ್ಚ-3/2022, ದಿನಾಂಕ:30.04.2022 ರಲ್ಲಿ ನೀಡಿರುವ ಸಹಮತಿಯನ್ವಯ ಹಾಗೂ ಸರ್ಕಾರದ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಯವರಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ,
ಮತ್ತು ಅವರ ಹೆಸರಿನಲ್ಲಿ

Sheenparveen 18/05/2022

(ಶಾಹೀನ್ ಪರ್ವೀನ್ . ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು, (ಎ ಮತ್ತು ಇ), ಬೆಂಗಳೂರು.
2. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3. ಆಯುಕ್ತರು, ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರಾಧಿಕಾರ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ) ವಿಧಾನಸೌಧ, ಬೆಂಗಳೂರು.
5. ಜಿಲ್ಲಾಧಿಕಾರಿಗಳು, ಬೆಳಗಾವಿ ಜಿಲ್ಲೆ, ಬೆಳಗಾವಿ.
6. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
7. ರಾಜ್ಯ ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ , ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಆಪ್ತ ಸಹಾಯಕರು, ವಿಕಾಸಸೌಧ, ಬೆಂಗಳೂರು.
4. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

***********